**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 95 ಗ್ರಾಪಂಕಾ 2013 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 03-03-2015.

**ಸುತ್ತೋಲೆ**

**ವಿಷಯ:** ಕರ್ನಾಟಕದಲ್ಲಿ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಕಾರ್ಯಕ್ರಮಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಸ್ಥಾಪಿಸುವ ಏಕ ಗವಾಕ್ಷಿ ಸೇವಾ ಕೇಂದ್ರಗಳ ಮೂಲಕ ಒದಗಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 382 ಗ್ರಾಪಂಅ 2014, ದಿ: 18-07-2014.
2. ಸರ್ಕಾರದ ತಿದ್ದೋಲೆ ಸಂಖ್ಯೆ: ಗ್ರಾಅಪ 382 ಗ್ರಾಪಂಅ 2014, ದಿ: 24-07-2014.
3. ಸರ್ಕಾರದ ಆದೇಶ ಸಂಖ್ಯೆ: ಎಲ್‌ಡಿ 63 ಎಲ್‌ಡಬ್ಲ್ಯೂಎ 2013 (ಭಾಗ-1), ದಿ:19-11-2013.

*****

1. ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಯೋಜನೆಗಳನ್ನು **"ಏಕ ಗವಾಕ್ಷಿ ಸೇವಾ ಕೇಂದ್ರಗಳನ್ನು"** ಗ್ರಾಮ ಪಂಚಾಯತಿಗಳಲ್ಲಿ ಸ್ಥಾಪಿಸಿ ಅವುಗಳ ಮೂಲಕ ಒದಗಿಸುವ ಯೋಜನೆಯನ್ನು ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳ ಆಯ್ದ ಒಂದೊಂದು ತಾಲ್ಲೂಕಿನಲ್ಲಿ ಅನುಷ್ಠಾನಗೊಳಿಸಲು ಉಲ್ಲೇಖ (3) ರಲ್ಲಿ ಆದೇಶ ಹೊರಡಿಸಲಾಗಿದೆ. ಈ ಯೋಜನೆಯ ಅನುಷ್ಠಾನದಲ್ಲಿ ಕಾರ್ಮಿಕ ಇಲಾಖೆಯು ನೋಡಲ್ (Nodal Department) ಇಲಾಖೆಯಾಗಿ ಕಾರ್ಯನಿರ್ವಹಿಸಲಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಮತ್ತು ನಗರಾಭಿವೃದ್ಧಿ ಇಲಾಖೆಗಳು ಪ್ರಮುಖ ಪಾಲುದಾರ ಇಲಾಖೆಗಳಾಗಿವೆ ಮತ್ತು ಕಂದಾಯ, ಮಹಿಳಾ ಮತ್ತು ಮಕ್ಕಳಾಭಿವೃದ್ಧಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳು ಸಹಕಾರ ಇಲಾಖೆಗಳಾಗಿ ಕಾರ್ಯನಿರ್ವಹಿಸಲಿವೆ.

2. ಈ ಯೋಜನೆಯಲ್ಲಿ ಜರ್ಮನ್ ಅಭಿವೃದ್ಧಿ ಸಹಕಾರ ಸಂಸ್ಥೆಯು (ಜಿ.ಐ.ಝಡ್) ಸಾಮರ್ಥ್ಯ ಬಲವರ್ಧನೆ, ತರಬೇತಿ, ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐ.ಇ.ಸಿ) ಸಾಮಗ್ರಿಗಳ ವಿನ್ಯಾಸ, ಅಧ್ಯಯನಗಳು, ಕಾರ್ಯಾಗಾರಗಳು ಇತ್ಯಾದಿ ಚಟುವಟಿಕೆಗಳನ್ನು ಕೈಗೊಳ್ಳಲು ಸಹಭಾಗೀ ಸಂಸ್ಥೆಯಾಗಿ ಪಾಲ್ಗೊಳ್ಳಲಿದೆ. ಎಲ್ಲಾ ಹಂತದ ಸಿಬ್ಬಂದಿಗಳಿಗೆ ಮತ್ತು ಅಧಿಕಾರಿಗಳಿಗೆ ಅಗತ್ಯ ತರಬೇತಿ ಕಾರ್ಯಕ್ರಮಗಳನ್ನು ಆಡಳಿತ ತರಬೇತಿ ಸಂಸ್ಥೆಯಿಂದ ನೀಡಲಾಗುವುದು.

3. ಈಗಾಗಲೇ ಜಿಲ್ಲಾಧಿಕಾರಿಗಳು ಯೋಜನೆಗೆ ನಿಗಧಿಪಡಿಸಿದ್ದ ಮಾನದಂಡಗಳ ಆಧಾರದ ಮೇಲೆ ತಾಲ್ಲೂಕುಗಳನ್ನು ಆಯ್ಕೆಮಾಡಿ ಕಳುಹಿಸಿದ್ದು (ಆಯ್ದ 30 ತಾಲ್ಲೂಕುಗಳ ಪಟ್ಟಿ ಲಗತ್ತಿಸಿದೆ), ಯೋಜನೆಯ ಗುರಿಯಂತೆ ತಾಲ್ಲೂಕುಗಳ ವ್ಯಾಪ್ತಿಗೆ ಬರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಏಕಗವಾಕ್ಷಿ ಸೇವಾ ಕೇಂದ್ರಗಳನ್ನು ಗ್ರಾಮ ಪಂಚಾಯತಿ ಮಟ್ಟದಲ್ಲಿ ಸ್ಥಾಪಿಸಲಾಗುವುದು.

4. **ಈ ಪಾಲುದಾರ ಇಲಾಖೆಗಳು ಅನುಷ್ಠಾನ ಮಾಡುತ್ತಿರುವ 13ರಿಂದ 15 ಪ್ರಮುಖ ಸಾಮಾಜಿಕ ಭದ್ರತಾ ಯೋಜನೆಗಳನ್ನು ಈ ಕೇಂದ್ರಗಳ ಮೂಲಕ ಒದಗಿಸುವುದು ಯೋಜನೆಯ ಮೂಲ ಉದ್ದೇಶವಾಗಿದೆ. ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾ.ಪಂ ಕಾರ್ಯದರ್ಶಿಗಳು ಮತ್ತು ನಗರವಾರ್ಡ್ ಮಟ್ಟದಲ್ಲಿ ಸಮುದಾಯ ಸಂಘಟಕರು ಸಮುದಾಯ ಮಾರ್ಗದರ್ಶಕರಾಗಿ ಕಾರ್ಯನಿರ್ವಹಿಸಲಿದ್ದಾರೆ.**

5. ಏಕ ಗವಾಕ್ಷಿ ಕೇಂದ್ರಗಳಲ್ಲಿ ನಿರ್ವಹಿಸಬೇಕಾಗಿರುವ ಕಾರ್ಯಗಳು ಮತ್ತು ಜವಾಬ್ದಾರಿಗಳ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಸಂಖ್ಯೆ: ಗ್ರಾ.ಅ.ಪ 382 ಗ್ರಾ.ಪಂ.ಅ 2014, ದಿನಾಂಕ 18.07.2014 ಮತ್ತು ನಗರಾಭಿವೃದ್ಧಿ ಇಲಾಖೆಯಿಂದ ಸಂಖ್ಯೆ: ನ.ಅ.ಇ 212 ಜಿ.ಇ.ಎಲ್ 2014, ಬೆಂಗಳೂರು, ದಿನಾಂಕ 26.06.2014 ಪ್ರತ್ಯೇಕ ಸರ್ಕಾರಿ ಆದೇಶಗಳನ್ನು ಹೊರಡಿಸಲಾಗಿದೆ (ಪ್ರತಿಗಳನ್ನು ಲಗತ್ತಿಸಿದೆ).

6. ಪ್ರಸ್ತುತದಲ್ಲಿ ಪೂರ್ವಭಾವಿ ಪ್ರಕ್ರಿಯೆಗಳು ಪೂರ್ಣಗೊಂಡಿದ್ದು, ಈ ಯೋಜನೆಯ ಅನುಷ್ಠಾನದ ಎಲ್ಲಾ ಹಂತಗಳಲ್ಲಿ ಭಾಗಿಯಾಗುವ ಸಿಬ್ಬಂದಿಗಳಿಗೆ, ಅಧಿಕಾರಿಗಳಿಗೆ ಹಾಗೂ ಇತರೇ ಭಾಗೀದಾರರುಗಳಿಗೆ ತರಬೇತಿ ನೀಡುವ ಮೂಲಕ ಪ್ರಾರಂಭಿಸಲು ಉದ್ದೇಶಿಸಿದೆ.

7. ಯೋಜನೆಯ **ಗುರಿಯಂತೆ ಆಯ್ದ ತಾಲ್ಲೂಕುಗಳ ವ್ಯಾಪ್ತಿಗೆ ಬರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಏಕ ಗವಾಕ್ಷಿ ಸೇವಾ ಕೇಂದ್ರಗಳನ್ನು ಸ್ಥಾಪಿಸಬೇಕಾಗಿದ್ದು, ಈ ಕೆಳಕಂಡಂತೆ ಆದ್ಯತೆ ಮೇರೆಗೆ ಏಕ ಗವಾಕ್ಷಿ ಸೇವಾ ಕೇಂದ್ರಗಳನ್ನು ಸ್ಥಾಪಿಸಿ ಅನುಷ್ಠಾನ ಮಾಡಲು ಇಲಾಖೆಯು ಅನುಮತಿಸಿದೆ;**

   1. **ಮೊದಲನೇ ಆದ್ಯತೆ**: ಯಾವ ಯಾವ ಗ್ರಾಮ ಪಂಚಾಯತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾ.ಪಂ ಕಾರ್ಯದರ್ಶಿಗಳು ಒಟ್ಟಿಗೆ ಕಾರ್ಯನಿರ್ವಹಿಸುತ್ತಿರುವ,
   2. **ಎರಡನೇ ಆದ್ಯತೆ**: ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಗ್ರಾ.ಪಂ ಕಾರ್ಯದರ್ಶಿಗಳು ಇಲ್ಲದಿದ್ದ ಪಕ್ಷದಲ್ಲಿ) ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿಗಳಲ್ಲಿ ಮತ್ತು
   3. **ಮೂರನೇ ಆದ್ಯತೆ**: ಗ್ರಾ.ಪಂ ಕಾರ್ಯದರ್ಶಿಗಳು ಕಾರ್ಯ ನಿರ್ವಹಿಸುತ್ತಿರುವ (ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಇಲ್ಲದಿದ್ದ ಪಕ್ಷದಲ್ಲಿ)

8. ಒಟ್ಟಾರೆ ತಾಲ್ಲೂಕಿನ ವ್ಯಾಪ್ತಿಗೆ ಒಳಪಡುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಹಂತ ಹಂತವಾಗಿ ಏಕ ಗವಾಕ್ಷಿ ಸೇವಾ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆ.

9. ಸಾಮರ್ಥ್ಯ ಅಭಿವೃದ್ಧಿಗಾಗಿ **ಗ್ರಾಮ ಪಂಚಾಯತಿಯ Facilitartor ಗೆ ಪ್ರೋತ್ಸಾಹದ ರೂಪದಲ್ಲಿ ಪ್ರಸ್ತಾವಿತ ಗ್ರಾಮ ಪಂಚಾಯತಿಗೆ ಮಾಹೆಯಾನ ರೂ.1500/- ಗಳಂತೆ ಪ್ರೋತ್ಸಾಹ ಧನ ಹಾಗೂ ರೂ. 500/- ಪ್ರಯಾಣ ಭತ್ಯೆಯನ್ನು GIZ ಸಂಸ್ಥೆಯು ನೀಡುವುದು.**

C. Balar

(ಸಿ.ಬಲರಾಮ್)
ಪೀಠಾಧಿಕಾರಿ (ಗ್ರಾಮ ಪಂಚಾಯತಿ)
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರುಗಳಿಗೆ:**

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
2. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.
3. ಆಯ್ದ 30 ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು,
4. ಆಯ್ದ 30 ಯೋಜನಾ ತಾಲ್ಲೂಕುಗಳು,
5. ರಾಜ್ಯದ 30 ಆಯ್ದ ತಾಲ್ಲೂಕುಗಳ ಎಲ್ಲಾ ಗ್ರಾಮ ಪಂಚಾಯಿತಿ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.

**ಇವರ ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ
2. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
3. ಕಾರ್ಮಿಕ ಆಯುಕ್ತರು, ಕಾರ್ಮಿಕ ಇಲಾಖೆ.
4. ಯೋಜನಾ ನಿರ್ದೇಶಕರು, ಜಿ.ಐ.ಝಡ್, ಬೆಂಗಳೂರು.